**Akashvani : Bangalore**
**Regional Bulletin In Kannada**
**25.04.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

**೧. ಬೆಂಗಳೂರು ಸೇರಿದಂತೆ ದೇಶದ ೪೭ ಸ್ಥಳಗಳಲ್ಲಿ ನಾಳೆ ಉದ್ಯೋಗ ಮೇಳ: ವರ್ಚುವಲ್ ಮೂಲಕ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೨. ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ಕಸ್ತೂರಿ ರಂಗನ್ ನಿಧನ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಸಂತಾಪ**

**೩. ನಾಡಿನ ಬಹು ಸಂಸ್ಕೃತಿ ಪ್ರತೀಕ 'ಕಾವೇರಿ ಆರತಿ'ಗೆ ನೀಲನಕ್ಷೆ ವಾರದಲ್ಲಿ ಸಿದ್ಧ- ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

**೪. ಬೆಲೆ ಏರಿಕೆಯ ಖಂಡಿಸಿ ಇದೇ ೨೮ ರಿಂದ ಮೂರು ದಿನಗಳ ಕಾಲ ಬೆಂಗಳೂರಿನಲ್ಲಿ ಹೋರಾಟಕ್ಕೆ ಬಿಜೆಪಿ ನಿರ್ಧಾರ**

**<><*<><>*><>**

ದೇಶಾದ್ಯಂತ ನಾಳೆ ನಡೆಯಲಿರುವ ಉದ್ಯೋಗ ಮೇಳದಲ್ಲಿ ಸುಮಾರು ೫೧ ಸಾವಿರ ಉದ್ಯೋಗ ನಿಯುಕ್ತಿ ಪತ್ರ ವಿತರಣ ಮಾಡಲಾಗುವುದು. ಪ್ರಧಾನಿ ನರೇಂದ್ರ ಮೋದಿಯವರು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿರುವ ಆದಾಯ ತೆರಿಗೆ ಇಲಾಖೆಯ ಜಂಟಿ ಆಯುಕ್ತ ರವೀಂದ್ರ,ಎಚ್, ದೇಶಾದ್ಯಂತ ೪೭ ಸ್ಥಳಗಳಲ್ಲಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಹುಬ್ಬಳ್ಳಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರದ ಯುವ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಸುಮಾರು ೫೦ ಉದ್ಯೋಗ ನಿಯುಕ್ತಿ ಪತ್ರ ವಿತರಿಸಲಿದ್ದಾರೆ ಎಂದು ತಿಳಿಸಿದ್ದಾರೆ.

**ಧ್ವನಿ: ಆದಾಯ ತೆರಿಗೆ ಇಲಾಖೆಯ ಜಂಟಿ ಆಯುಕ್ತ ರವೀಂದ್ರ ಎಚ್.**

ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕಾವೇರಿ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಲಿದ್ದಾರೆ. ಬೆಂಗಳೂರು ಪಶ್ಚಿಮ ಆಯುಕ್ತಾಲಯದ ಜಿಎಸ್‌ಟಿ ಕೇಂದ್ರ ತೆರಿಗೆ ವಿಭಾಗದ ವತಿಯಿಂದ ಬೆಂಗಳೂರಿನ

ಜಾಲಹಳ್ಳಿಯಲ್ಲಿರುವ ಕಸ್ಟಮ್ಸ್ ಪರೋಕ್ಷ ತೆರಿಗೆ ಮತ್ತು ಮಾದಕ ದ್ರವ್ಯಗಳ ರಾಷ್ಟ್ರೀಯ ಸಂಸ್ಥೆಯ ಆವರಣದಲ್ಲಿ ಆಯೋಜಿಸಲಾಗಿರುವ ಉದ್ಯೋಗ ಮೇಳದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ.ವಿರೇಂದ್ರ ಕುಮಾರ್ ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಭಾರತೀಯ ಬಾಹ್ಯಾಕಾಶ ವಿಜ್ಞಾನಿ, ಇಸ್ರೋದ ಮುಖ್ಯಸ್ಥರಾಗಿದ್ದ ಡಾ. ಕೆ. ಕಸ್ತೂರಿ ರಂಗನ್ ಅವರು ಇಂದು ಬೆಳಗ್ಗೆ ತಮ್ಮ ಸ್ವಗೃಹದಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೪ ವರ್ಷ ವಯಸ್ಸಾಗಿತ್ತು. ಅವರು ಭಾರತ ಸರ್ಕಾರದ ಪದ್ಮಶ್ರೀ, ಪದ್ಮಭೂಷಣ, ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದ ಅವರು, ರಾಷ್ಟ್ರೀಯ ಶಿಕ್ಷಣ ನೀತಿಯ ಹಿಂದಿನ ಪ್ರಮುಖ ಶಕ್ತಿಯಾಗಿದ್ದರು. ಕಸ್ತೂರಿ ರಂಗನ್ ಅವರು ನವದೆಹಲಿಯ ಜವಹರಲಾಲ್ ನೆಹರು ವಿಶ್ವವಿದ್ಯಾಲಯ, ರಾಜಸ್ತಾನದ ಸೆಂಟ್ರಲ್ ಯೂನಿವರ್ಸಿಟಿ ಹಾಗೂ ಎನ್‌ಐಐಟಿ ವಿಶ್ವವಿದ್ಯಾನಿಲಯಗಳ ಕುಲಪತಿಗಳಾಗಿದ್ದರು. ಅವರು ಕರ್ನಾಟಕ ಜ್ಞಾನ ಆಯೋಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು. ರಾಜ್ಯಸಭಾ ಸದಸ್ಯರೂ ಆಗಿದ್ದ ಅವರು, ಭಾರತೀಯ ಯೋಜನಾ ಆಯೋಗದ ಸದಸ್ಯರಾಗಿದ್ದರು. ಪಶ್ಚಿಮಘಟ್ಟದ ಸಂರಕ್ಷಣೆ ಕುರಿತ ಕಸ್ತೂರಿ ರಂಗನ್ ವರದಿಯಿಂದ ಅವರು ಜನಜನಿತರಾಗಿದ್ದರು. ಬೆಂಗಳೂರಿನ ರಾಮನ್ ಸಂಶೋಧನಾ ಸಂಸ್ಥೆಯ ಆವರಣದಲ್ಲಿ ಭಾನುವಾರ ಬೆಳಗ್ಗೆ ೧೦ ರಿಂದ ೧೨ರ ವರೆಗೆ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕಾಗಿ ವ್ಯವಸ್ಥೆ ಮಾಡಲಾಗಿದೆ.

**<><*<><>*><>**

ಕಸ್ತೂರಿ ರಂಗನ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ತಮ್ಮ ಶೋಕ ಸಂದೇಶದಲ್ಲಿ ರಾಷ್ಟ್ರಪತಿಗಳು ಭಾರತದ ಬಾಹ್ಯಾಕಾಶ ಕಾರ್ಯಕ್ರಮದ ಬೆಳವಣಿಗೆಯಲ್ಲಿ ಇಸ್ರೋ ಅಧ್ಯಕ್ಷರಾಗಿ ಡಾ.ಕಸ್ತೂರಿ ರಂಗನ್ ಅವರು ಮಹತ್ವದ ಪಾತ್ರ ವಹಿಸಿದ್ದರು. ರಾಷ್ಟ್ರೀಯ ಶಿಕ್ಷಣ ನೀತಿ ರೂಪಿಸುವಲ್ಲಿಯೂ ಅವರು ಕೊಡುಗೆ ನೀಡಿದ್ದರು ಎಂದು ಸ್ಮರಿಸಿದ್ದಾರೆ. ತಮ್ಮ ಸಂದೇಶದಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಡಾ.ಕಸ್ತೂರಿ ರಂಗನ್ ಅವರು ಒಬ್ಬ ದಾರ್ಶನಿಕ ನಾಯಕರಾಗಿದ್ದರು. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ತಮ್ಮ ಸಂದೇಶದಲ್ಲಿ ಭಾರತದ ವೈಜ್ಞಾನಿಕ ಮತ್ತು ಶೈಕ್ಷಣಿಕ ಪಯಣದಲ್ಲಿ ನಿಸ್ವಾರ್ಥ ಕೊಡುಗೆ ನೀಡಿದ್ದ ಡಾ.ಕಸ್ತೂರಿ ರಂಗನ್ ಅವರು ಯುವ ವಿಜ್ಞಾನಿಗಳು ಮತ್ತು ಸಂಶೋಧಕರಿಗೆ ಅತ್ಯುತ್ತಮ ಮಾರ್ಗದರ್ಶಕರಾಗಿದ್ದರು ಎಂದು ಸ್ಮರಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಾ.ಕೆ.ಕಸ್ತೂರಿ ರಂಗನ್ ಅವರ ನಿಧನಕ್ಕೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಂತಾಪ ಸೂಚಿಸಿದ್ದಾರೆ.

ಬಾಹ್ಯಾಕಾಶ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದ ಕೀರ್ತಿ ಪತಾಕೆಯನ್ನು ಆಗಸದೆತ್ತರಕ್ಕೆ ಹಾರಿಸಿದ ವಿಜ್ಞಾನಿ ಡಾ.ಕೆ.ಕಸ್ತೂರಿ ರಂಗನ್ ಅವರು ದೀರ್ಘಕಾಲ ಇಸ್ರೋ ಅಧ್ಯಕ್ಷರಾಗಿ ಹಾಗೂ ಕೇಂದ್ರ ಬಾಹ್ಯಾಕಾಶ ಮಂಡಳಿಯ ನಿರ್ದೇಶಕರಾಗಿ ಭಾರತವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಳ್ಳುವಂತೆ ಮಾಡಿದ್ದರು ಎಂದು ಮುಖ್ಯಮಂತ್ರಿಯವರು ಸ್ಮರಿಸಿದ್ದಾರೆ.ಖ್ಯಾತ ವಿಜ್ಞಾನಿ, ಇಸ್ರೋ ಮಾಜಿ ಅಧ್ಯಕ್ಷ ಕೆ.ಕಸ್ತೂರಿ ರಂಗನ್ ಅವರ ನಿಧನದ ಸುದ್ದಿ ಕೇಳಿ ಅತ್ಯಂತ ನೋವಾಯಿತು. ಇಸ್ರೊ ಅಧ್ಯಕ್ಷರಾಗಿ ಬಾಹ್ಯಾಕಾಶ ಕ್ಷೇತ್ರದಲ್ಲಿ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಾಮಾಜಿಕ ಜಾಲತಾಣದದಲ್ಲಿ ಸಂತಾಪ ಸೂಚಿಸಿದ್ದಾರೆ.

**<><*<><>*><>**

ಎಲ್ಲಾ ಜಾತಿ ಮತ್ತು ಎಲ್ಲಾ ಧರ್ಮದ ಬಡವರಿಗೆ ನೆರವಾಗುವ ರೀತಿಯಲ್ಲಿ ಹಾಸ್ಟೆಲ್ ಮತ್ತು ಶಿಕ್ಷಣ ಸಂಸ್ಥೆಗಳನ್ನು ನಿರ್ಮಿಸುದರಿಂದ ಅಂಬೇಡ್ಕರ್ ಅವರ ಸಮಾನತೆಯ ಆಶಯ ಈಡೇರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಚಾಮರಾಜನಗರ ಜಿಲ್ಲಾ ಕುರುಬರ ಸಂಘ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಕನಕ ಸಮುದಾಯ ಭವನಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಈಗಾಗಲೇ ೨ ಕೋಟಿ ರೂಪಾಯಿಯಲ್ಲಿ ೫೦ ಲಕ್ಷ ರೂಪಾಯಿ ಬಿಡುಗಡೆ ಆಗಿದೆ. ಹಲವರು ದೇಣಿಗೆ ಕೂಡ ಕೊಟ್ಟಿದ್ದಾರೆ. ಸಮುದಾಯ ಭವನ ನಿರ್ಮಿಸಿವುದರ ಜೊತೆಗೆ ಹಾಸ್ಟೆಲ್ ಮತ್ತು ಶಿಕ್ಷಣ ಸಂಸ್ಥೆಗಳನ್ನೂ ನಿರ್ಮಿಸಿ, ಜಿಲ್ಲೆಯ ಎಲ್ಲಾ ಹಿಂದುಳಿದ ಸಮುದಾಯಗಳ ಬಡ ಮಕ್ಕಳಿಗೆ ಶೈಕ್ಷಣಿಕ ನೆರವು ದೊರಕುವಂತೆ ಮಾಡಲು ಸಲಹೆ ನೀಡಿದರು.

**<><*<><>*><>**

ನಾಡಿನ ವಿವಿಧ ಸಂಸ್ಕೃತಿ ಒಳಗೊಂಡಂತೆ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಸಮಿತಿಯು ನೀಲನಕ್ಷೆ ರೂಪಿಸುತ್ತಿದ್ದು, ವಾರದಲ್ಲಿ ಸಿದ್ಧವಾಗಲಿದ್ದು, ದಸರಾ ಸಂದರ್ಭದಲ್ಲಿ ಆರತಿ ಕಾರ್ಯಕ್ರಮ ನಡೆಸುವ ಉದ್ದೇಶವಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆ ಕೆಆರ್‌ಎಸ್ ನಲ್ಲಿ "ಕಾವೇರಿ ಆರತಿ" ನಡೆಸುವ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇಂದು ಜನ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಜತೆ ಸಭೆ ನಡೆಸಿದ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು. “ನಮ್ಮ ಸಂಸ್ಕೃತಿ, ಧಾರ್ಮಿಕ ಆಚರಣೆ ಸೇರಿಸಿ ಕಾರ್ಯಕ್ರಮ ರೂಪಿಸಲು ಸಚಿವ ಚೆಲುವನಾರಾಯಸ್ವಾಮಿ ಅವರ ನೇತೃತ್ವದ ಸಮಿತಿಗೆ ಸಲಹೆ ನೀಡಲಾಗಿದೆ. ಈ ಸಮಿತಿ ಮುಂದಿನ ೮ ರಿಂದ ೧೦ ದಿನಗಳಲ್ಲಿ ಕಾರ್ಯಕ್ರಮದ ನೀಲನಕ್ಷೆ ಸಿದ್ಧಪಡಿಸಲಿದೆ ಎಂದು ತಿಳಿಸಿದರು.

<><*<><>*><>

ರಾಜ್ಯ ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆಯ ವಿರುದ್ಧ ಬೆಂಗಳೂರಿನಲ್ಲಿ ಬಿಜೆಪಿ ಹೋರಾಟ ನಡೆಸಲಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಬಿಎಂಪಿ ವ್ಯಾಪ್ತಿಯ ಎಲ್ಲ ವಲಯ ಆಯುಕ್ತರ ಕಚೇರಿಯ ಮುಂದೆ ಇದೇ ೨೮ ರಿಂದ ಮೂರು ದಿನಗಳ ಕಾಲ ಹೋರಾಟ ಮಾಡಲಾಗುತ್ತದೆ. ಹಾಲು, ವಿದ್ಯುತ್ ಹಾಗೂ ಆಸ್ತಿ ತೆರಿಗೆ ಹಾಗೂ ಪಾರ್ಕಿಂಗ್ ಶುಲ್ಕದ ಬಗ್ಗೆ ಹೋರಾಟ ಮಾಡಲಾಗುವುದು. ಬೆಂಗಳೂರಿನ ಜನರ ಮೇಲೆ ಕಾಂಗ್ರೆಸ್ ಭರಪೂರ ತೆರಿಗೆಗಳನ್ನು ಹೇರಿದೆ. ಪ್ರತಿ ಮನೆಗಳಿಗೆ ಹೋಗಿ ಕರಪತ್ರ ಹಂಚಲಾಗುವುದು. ಬಿಬಿಎಂಪಿ ಚುನಾವಣೆಯನ್ನು ಸರ್ಕಾರ ಮುಂದೂಡುತ್ತಿದೆ. ಈ ಬಗ್ಗೆ ಕೂಡ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

<><*<><>*><>

ಕರ್ನಾಟಕ ಲೋಕಸೇವಾ ಆಯೋಗದ- ಕೆಪಿಎಸ್‌ಸಿಯ ಸುಮಾರು ೭೦ ಸಾವಿರದಷ್ಟು ಎಲ್ಲಾ ಪರೀಕ್ಷಾರ್ಥಿಗಳಿಗೂ ಸೂಕ್ತ ಕಾಲಾವಕಾಶ ನೀಡಿ ಮರುಪರೀಕ್ಷೆ ನಡೆಸಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಮೇಲ್ಮನೆಯಲ್ಲಿ ಕೊಟ್ಟ ವಾಗ್ದಾನದ ರೀತಿಯಲ್ಲಿ ಸಹಾಯ ಮಾಡಬೇಕು ಎಂದು ಒತ್ತಾಯಿಸಿದರು. ಕೆಪಿಎಸ್‌ಸಿ ಅವಾಂತರಗಳನ್ನು ಪ್ರಶ್ನಿಸಿ ವಿದ್ಯಾರ್ಥಿಗಳು ಬಹುಕಾಲದಿಂದ ಹೋರಾಟ ಮಾಡುತ್ತಿದ್ದಾರೆ. ಅವರಿಗೆ ಆದ ಅನ್ಯಾಯ, ಕನ್ನಡಕ್ಕೆ ಆದ ಅಪಮಾನ, ಪ್ರಶ್ನೆಪತ್ರಿಕೆಗಳಲ್ಲಿನ ದೋಷ, ಹಲವಾರು ವಿಷಯಗಳ ಕುರಿತು ಅವರ ಹೋರಾಟ ನಡೆದಿತ್ತು. ನಾವು ಕೂಡ ವಿದ್ಯಾರ್ಥಿಗಳನ್ನು ಬೆಂಬಲಿಸಿ, ಅವರ ವಿಚಾರಗಳ ಬಗ್ಗೆ ಸದನದಲ್ಲಿ ಹಾಗೂ ಹೊರಗೂ ಸರ್ಕಾರದ ಗಮನ ಸೆಳೆದಿದ್ದೇವೆ ಎಂದು ತಿಳಿಸಿದರು.ಮತ್ತೊಂದೆಡೆ ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಕೆಎಎಸ್ ಪರೀಕ್ಷೆಗೆ ಸಂಬಂಧಿಸಿದಂತೆ ಹೈಕೋರ್ಟ್ ತೀರ್ಪು ನೀಡಿದೆ. ಅಧಿವೇಶನದಲ್ಲಿ ತಾವು ಈ ವಿಷಯ ಪ್ರಸ್ತಾಪಿಸಿದಾಗ ತೀರ್ಪು ಬಂದ ಮೇಲೆ ಮರು ಪರೀಕ್ಷೆ ಬಗ್ಗೆ ಮುಕ್ತ ಮನಸ್ಸಿನಿಂದ ಪರಿಶೀಲನೆ ನಡೆಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಈಗ ಯಾವ ನಿರ್ಧಾರ ಕೈಗೊಳ್ಳುತ್ತಾರೆ ಎಂಬುದನ್ನು ಗಮನಿಸಿ ಅಗತ್ಯಬಿದ್ದರೆ ಮುಂದೆಯೂ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

<><*<><>*><>

ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆ ಬಳಿ ಕೈಗಾರಿಕಾ ಪ್ರದೇಶ ನಿರ್ಮಾಣಕ್ಕಾಗಿ ೨ ಸಾವಿರದ ೮೬೩ ಎಕರೆ ಭೂಮಿಯನ್ನು ಗುರುತಿಸಲಾಗಿದ್ದು, ಭೂಸ್ವಾಧೀನಕ್ಕೆ ರೈತರ ಅಭಿಪ್ರಾಯಗಳನ್ನು ಸಂಗ್ರಹಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕೈಗಾರಿಕಾ ಪ್ರುದೇಶವನ್ನಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಿರುವ ಯೋಜನೆಯ ಅನುಷ್ಠಾನದಲ್ಲಿ ಉಂಟಾಗಿರುವ ಸಮಸ್ಯೆಗಳ ಕುರಿತು ಚರ್ಚಿಸಲು ಆಯೋಜಿಸಿದ್ದ ರೈತರು ಮತ್ತು ಅಧಿಕಾರಿಗಳ ಸಭೆಯಲ್ಲಿ ಸಚಿವರು ಭಾಗಿಯಾಗಿದ್ದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹಾಗೂ ರಾಷ್ಟ್ರೀಯ ಹೆದ್ದಾರಿಗೆ ಸಮೀಪವಿರುವ ಜಂಗಮಕೋಟೆ ಹೋಬಳಿ ಪ್ರದೇಶದ ವ್ಯಾಪ್ತಿಯಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಿದ್ದೇ ಆದಲ್ಲಿ ಹೂಡಿಕೆದಾರರು, ಈ ಭಾಗಕ್ಕೆ ಹೆಚ್ಚಾಗಿ ಬರುವ ನಿರೀಕ್ಷೆ ಇದೆ ಎಂದರು. ಇದು ಜಿಲ್ಲೆಯ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಪೂರಕವಾಗಲಿದೆ. ಈಗಾಗಲೇ ರೈತರನ್ನು ಕರೆಯಿಸಿ ಅವರು ಸ್ವಯಂಪ್ರೇರಿತರಾಗಿ ಭೂಮಿ ನೀಡಿ ಅಭಿವೃದ್ಧಿಗೆ ಸಹಕರಿಸುವಂತೆ ಮನವಿಮಾಡಿ ಮನವೊಲಿಸುವ ಪ್ರಯತ್ನಗಳು ನಡೆದಿವೆ. ಕೆಲವು ರೈತರು ಭೂಮಿ ನೀಡಲು ಸಕಾರಾತ್ಮಕವಾಗಿ ಸ್ಪಂದಿಸುತ್ತಿದ್ದು, ಕೆಲವು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<>ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**